**All India Radio: Bangalore**
**National Bulletin In Kannada**
**12.04.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**12.04.2026 1.10 p.m.**

**<><><><>**

ಮುಖ್ಯಾಂಶಗಳು

1. ೨೦೨೯ ರ ಲೋಕಸಭಾ ಮತ್ತು ವಿಧಾನಸಭಾ ಚುನಾವಣೆಗೂ ಮುನ್ನ ಮಹಿಳಾ ಮೀಸಲಾತಿ ಅನುಷ್ಠಾನ - ಪ್ರಧಾನಿ ನರೇಂದ್ರ ಮೋದಿ
2. ಇದೇ ೧೬ ರಿಂದ ೩ ದಿನಗಳ ವಿಶೇಷ ಸಂಸತ್ ಅಧಿವೇಶನ; ಬಿಜೆಪಿ ಸಂಸದರಿಗೆ ವಿಪ್ ಜಾರಿ
3. ಅಭಿವೃದ್ಧಿಯು, ಎಲ್ಲರನ್ನೂ ಒಳಗೊಂಡು ಸಮಾಜದ ಪ್ರತಿಯೊಂದು ವರ್ಗವನ್ನು ತಲುಪಿದಾಗ ಮಾತ್ರ ನಿಜವಾದ ಅಭಿವೃದ್ಧಿ - ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್
4. ಖ್ಯಾತ ಹಿನ್ನೆಲೆ ಗಾಯಕಿ ಆಶಾ ಬೋಸ್ಲೆ ನಿಧನ; ನಾಳೆ ಅಂತ್ಯಕ್ರಿಯೆ
5. ಐಪಿಎಲ್ ಟಿ-೨೦ ಕ್ರಿಕೆಟ್: ಇಂದು ಲಖ್ನೋ ಸೂಪರ್ ಜೈಂಟ್ಸ್ - ಗುಜರಾತ್ ಟೈಟನ್ಸ್ ಹಾಗೂ ರಾಯಲ್ ಚಾಲೆಂಜರ್ಸ್ ಬೆಂಗಳೂರು - ಮುಂಬೈ ಇಂಡಿಯನ್ಸ್ ತಂಡಗಳ ಮುಖಾಮುಖಿ

<><><><>

ಮಹಿಳಾ ಮೀಸಲಾತಿ ಕಾಯ್ದೆಯನ್ನು ಅದರ ನಿಜವಾದ ಸ್ಫೂರ್ತಿಯೊಂದಿಗೆ ಜಾರಿಗೆ ತರುವ ಸಮಯ ಬಂದಿದೆ. ೨೦೨೯ ರ ಲೋಕಸಭಾ ಚುನಾವಣೆ ಮತ್ತು ವಿಧಾನಸಭಾ ಚುನಾವಣೆಯನ್ನು ಮಹಿಳಾ ಮೀಸಲಾತಿಯೊಂದಿಗೆ ನಡೆಸಲಾಗುವುದು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸಂಸತ್ತಿನ ಮೂರು ದಿನಗಳ ವಿಶೇಷ ಅಧಿವೇಶನಕ್ಕೂ ಮುನ್ನ, ಲೋಕಸಭೆ ಮತ್ತು ರಾಜ್ಯಸಭೆಯ ಸದನದ ನಾಯಕರಿಗೆ ಬರೆದ ಪತ್ರದಲ್ಲಿ ಪ್ರಧಾನಿ, ಎಲ್ಲಾ ಸದಸ್ಯರು ಒಂದೇ ಧ್ವನಿಯಲ್ಲಿ ಒಟ್ಟಾಗಿ ಮಹಿಳಾ ಮೀಸಲಾತಿ ಕಾನೂನಿನ ತಿದ್ದುಪಡಿಗಳನ್ನು ಅಂಗೀಕರಿಸಲು ಕರೆ ನೀಡಿದ್ದಾರೆ. ಇದನ್ನು ಅಧಿಕೃತವಾಗಿ 'ನಾರಿ ಶಕ್ತಿ ವಂದನ್ ಅಧಿನಿಯಮ್' ಎಂದು ಕರೆಯಲಾಗುತ್ತದೆ. ವಿಸ್ತೃತ ಚರ್ಚೆಗಳ ನಂತರ, ದೇಶಾದ್ಯಂತ 'ನಾರಿ ಶಕ್ತಿ ವಂದನ್ ಅಧಿನಿಯಮ್'

ಅನ್ನು ಅದರ ನಿಜವಾದ ಸ್ವರೂಪದಲ್ಲಿ ಜಾರಿಗೆ ತರುವ ಸಮಯ ಬಂದಿದೆ ಎಂದು ಪ್ರಧಾನಿ ತಮ್ಮ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ೨೦೨೯ ರ ಲೋಕಸಭಾ ಚುನಾವಣೆ ಮತ್ತು ವಿಧಾನಸಭಾ ಚುನಾವಣೆಯನ್ನು ಮಹಿಳಾ ಮೀಸಲಾತಿಯೊಂದಿಗೆ ನಡೆಸುವುದು ಕಡ್ಡಾಯವಾಗಿದೆ ಎಂದು ತಿಳಿಸಿದ್ದಾರೆ. ಸಂಸತ್ತಿನ ಬಜೆಟ್ ಅಧಿವೇಶನವನ್ನು ವಿಸ್ತರಿಸಲಾಗಿದ್ದು, ಇದೇ ೧೬ ರಿಂದ ೧೮ ರವರೆಗೆ ಮೂರು ದಿನಗಳ ವಿಶೇಷ ಅಧಿವೇಶನವನ್ನು ಕರೆಯಲಾಗಿದೆ. ಮಹಿಳಾ ಮೀಸಲಾತಿ ಕಾಯ್ದೆ, ಲೋಕಸಭಾ ಸ್ಥಾನಗಳ ಸಂಖ್ಯೆಯನ್ನು ೮೧೬ ಕ್ಕೆ ಹೆಚ್ಚಿಸುವುದನ್ನು ಖಚಿತಪಡಿಸುತ್ತದೆ, ಅದರಲ್ಲಿ ೨೭೩ ಮಹಿಳೆಯರಿಗೆ ಮೀಸಲಿಡಲಾಗುತ್ತದೆ. ೨೦೨೩ ರಲ್ಲಿ ಸಂವಿಧಾನವನ್ನು ತಿದ್ದುಪಡಿ ಮಾಡುವ ಮೂಲಕ ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇಕಡಾ ೩೩ ರಷ್ಟು ಮೀಸಲಾತಿ ನೀಡುವ ನಿಬಂಧನೆಯನ್ನು ತರಲಾಗಿತ್ತು.

<><><><>

ಇದೇ ೧೬ ರಿಂದ ಆರಂಭವಾಗಲಿರುವ ೩ ದಿನಗಳ ವಿಶೇಷ ಸಂಸತ್ ಅಧಿವೇಶನಕ್ಕೆ ಮುಂಚಿತವಾಗಿ ಬಿಜೆಪಿ ಸಂಸದರಿಗೆ ವಿಪ್ ಜಾರಿ ಮಾಡಿದೆ. ಲೋಕಸಭೆ ಮತ್ತು ರಾಜ್ಯಸಭೆಯ ಎಲ್ಲಾ ಸಂಸತ್ ಸದಸ್ಯರಿಗೆ ಬಿಜೆಪಿ ಕಟ್ಟುನಿಟ್ಟಾದ ಮೂರು ಸಾಲಿನ ವಿಪ್ ಜಾರಿ ಮಾಡಿದ್ದು, ಇದೇ ೧೬ ರಿಂದ ೧೮ ರವರೆಗೆ ನಡೆಯಲಿರುವ ಅಧಿವೇಶನದಲ್ಲಿ ನಿರಂತರವಾಗಿ ಸದನದಲ್ಲಿ ಹಾಜರಿರುವಂತೆ ನಿರ್ದೇಶಿಸಿದೆ. ಮಹಿಳಾ ಮೀಸಲಾತಿ ತಿದ್ದುಪಡಿ ಮಸೂದೆಯನ್ನು ಕೇಂದ್ರೀಕರಿಸಿ ನಡಸಲಾಗುವ ಈ ವಿಶೇಷ ಅಧಿವೇಶನದಲ್ಲಿ ಎಲ್ಲಾ ಕೇಂದ್ರ ಸಚಿವರು ಮತ್ತು ಸದಸ್ಯರು ಮೂರು ದಿನವೂ ಸದನದಲ್ಲಿ ಹಾಜರಿರಬೇಕು. ಸದಸ್ಯರು ವಿಪ್ ಅನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಸೂಚಿಸಿದೆ.

<><><><>

ಅಭಿವೃದ್ಧಿಯು, ಎಲ್ಲರನ್ನೂ ಒಳಗೊಂಡು ಸಮಾಜದ ಪ್ರತಿಯೊಂದು ವರ್ಗವನ್ನು ತಲುಪಿದಾಗ ಮಾತ್ರ ಅದನ್ನು ನಿಜವಾದ ಅಭಿವೃದ್ಧಿ ಎಂದು ಕರೆಯಬಹುದು ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ತಂತ್ರಜ್ಞಾನ ಮತ್ತು ವಿಜ್ಞಾನದ ಮೂಲಕ ಬುಡಕಟ್ಟು ಭಾರತವನ್ನು ಪರಿವರ್ತಿಸುವ ಕುರಿತ ರಾಷ್ಟ್ರೀಯ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು, ಭಾರತದ ಬುಡಕಟ್ಟು ಪ್ರದೇಶಗಳು ಹಸಿರು ಆರ್ಥಿಕ ಅಭಿವೃದ್ಧಿಗೆ ಮಹತ್ವದ ಅವಕಾಶವನ್ನು ಒದಗಿಸುತ್ತವೆ ಎಂದು ಹೇಳಿದ್ದಾರೆ. ಆಧುನಿಕ ವಿಜ್ಞಾನವು ಭಾಷೆ, ನಂಬಿಕೆ

ಮತ್ತು ಸಂಸ್ಕೃತಿಗೆ ಗೌರವದೊಂದಿಗೆ ಕೈಜೋಡಿಸಿದಾಗ, ಅದು ಪ್ರತಿ ಸಮುದಾಯಕ್ಕೂ ರಕ್ಷಣೆ ಮತ್ತು ಸಬಲೀಕರಣದ ಶಕ್ತಿಯಾಗುತ್ತದೆ ಎಂದು ಅವರು ತಿಳಿಸಿದ್ದಾರೆ. ಈ ಕಾರ್ಯಕ್ರಮವು ಐಟಿಐಟಿಐ ಡೂನ್ ಸಂಸ್ಕೃತಿ ಶಾಲೆಯ ಬೆಳ್ಳಿ ಮಹೋತ್ಸವವನ್ನು ಸಹ ಪ್ರತಿನಿಧಿಸಿತು. ಇದು ವಿಜ್ಞಾನ ಮತ್ತು ತಂತ್ರಜ್ಞಾನದ ಮೂಲಕ ಬುಡಕಟ್ಟು ಯುವಕರನ್ನು ಸಬಲೀಕರಣಗೊಳಿಸುವಲ್ಲಿ ಅದರ ಪಾತ್ರವನ್ನು ಪ್ರತಿಬಿಂಬಿಸಿದೆ.

<><><><>

ತಮಿಳುನಾಡಿನಲ್ಲಿ ಡಿಎಂಕೆ ಪಕ್ಷದ ಕಳಪೆ ಆಡಳಿತವನ್ನು ಬಿಜೆಪಿ ಕಾರ್ಯಕರ್ತರು ಬಯಲು ಮಾಡಿದ್ದಾರೆ ಎಂದು ಹಿರಿಯ ಬಿಜೆಪಿ ನಾಯಕ, ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಮಿಳುನಾಡು ಬಿಜೆಪಿ ಕಾರ್ಯಕರ್ತರನ್ನು ಅಭಿನಂದಿಸಿರುವ ಪ್ರಧಾನಿ, ರಾಜ್ಯಕ್ಕಾಗಿ ಎನ್‌ಡಿಎಯ ಅಭಿವೃದ್ಧಿ ದೃಷ್ಟಿಕೋನವನ್ನು ಕಾರ್ಯಕರ್ತರು ವಿವರಿಸಿದ್ದಾರೆ. ನಾಳೆ ಸಂಜೆ 'ಮೇರಾ ಬೂತ್, ಸಬ್ಸೆ ಮಜ್ಬೂತ್ ಸಂವಾದ್ ಕಾರ್ಯಕ್ರಮದ ಸಂದರ್ಭದಲ್ಲಿ ಬಿಜೆಪಿ ಕಾರ್ಯಕರ್ತರೊಂದಿಗೆ ತಾವು ಸಂವಾದ ನಡೆಸುವುದಾಗಿಯೂ ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ.

<><><><>

ಪಶ್ಚಿಮ ಬಂಗಾಳದಲ್ಲಿ ಮುಂಬರುವ ವಿಧಾನಸಭಾ ಚುನಾವಣೆಗೆ ಪ್ರಚಾರ ತೀವ್ರಗೊಳ್ಳುತ್ತಿದೆ. ವಿವಿಧ ರಾಜಕೀಯ ಪಕ್ಷಗಳ ನಾಯಕರು ರ‍್ಯಾಲಿ, ರೋಡ್ ಶೋಗಳು ಮತ್ತು  ಸಾರ್ವಜನಿಕ ಸಭೆಗಳನ್ನು ನಡೆಸುತ್ತಿದ್ದಾರೆ. ಡಾರ್ಜಿಲಿಂಗ್ ಬೆಟ್ಟಗಳು ಮತ್ತು ಜಲಪೈಗುರಿ ಜಿಲ್ಲೆಗಳ ವಿಧಾನಸಭಾ ಕ್ಷೇತ್ರಗಳ ೧೩ ಅಭ್ಯರ್ಥಿಗಳನ್ನು ಬೆಂಬಲಿಸಲು ಹಿರಿಯ ಬಿಜೆಪಿ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಸಿಲಿಗುರಿಯ ಕವಾಖಲಿಯಲ್ಲಿ ಬೃಹತ್ ಪರಿವರ್ತನ ಸಂಕಲ್ಪ ರ‍್ಯಾಲಿಯನ್ನು ನಡೆಸಲಿದ್ದಾರೆ. ಡಾರ್ಜಿಲಿಂಗ್ ಜಿಲ್ಲೆಯ ಎಲ್ಲಾ ೫ ಸ್ಥಾನಗಳು, ಕಾಲಿಂಪಾಂಗ್ ಜಿಲ್ಲೆಯ ೧ ಸ್ಥಾನ ಮತ್ತು ಜಲಪೈಗುರಿ ಜಿಲ್ಲೆಯ ೭ ಸ್ಥಾನಗಳಲ್ಲಿ ಬಿಜೆಪಿ ಸ್ಪರ್ಧಿಸುತ್ತಿದೆ. ಪ್ರಧಾನಿಯವರ ಇಂದಿನ ರ‍್ಯಾಲಿಯನ್ನು ಗಮನದಲ್ಲಿಟ್ಟುಕೊಂಡು ಭದ್ರತೆಯನ್ನು ಹೆಚ್ಚಿಸಲಾಗಿದೆ. ಈ ಕ್ಷೇತ್ರಗಳಲ್ಲಿ  ಇದೇ ೨೩ ರಂದು ಮೊದಲ ಹಂತದ ಮತದಾನ ನಡೆಯಲಿದೆ. ಮೇ ೪ ರಂದು ಎಣಿಕೆ ನಡೆಯಲಿದೆ. ಟಿಎಂಸಿ ನಾಯಕಿ ಮತ್ತು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ನಾಳೆ ಸಿಲಿಗುರಿಯಲ್ಲಿ ಬೃಹತ್ ಚುನಾವಣಾ ರ‍್ಯಾಲಿ ನಡೆಸಲಿದ್ದಾರೆ.

<><><><>

ಕೇಂದ್ರ ಸರ್ಕಾರ ಡೀಸೆಲ್ ಮೇಲಿನ ರಫ್ತು ಸುಂಕವನ್ನು ಲೀಟರ್‌ಗೆ ೨೧.೫ ರೂಪಾಯಿಗಳಿಂದ ೫೫.೫ ರೂಪಾಯಿಗಳಿಗೆ ಹೆಚ್ಚಿಸಿದೆ. ವಿಮಾನಯಾನ ಟರ್ಬೈನ್ ಇಂಧನದ ಮೇಲಿನ ಸುಂಕವನ್ನು ಲೀಟರ್‌ಗೆ ೨೯.೫ ರೂಪಾಯಿಗಳಿಂದ ೪೨ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ ಎಂದು ಹಣಕಾಸು ಸಚಿವಾಲಯ ತಿಳಿಸಿದೆ.

ಏತನ್ಮಧ್ಯೆ, ಪೆಟ್ರೋಲ್ ಮೇಲಿನ ರಫ್ತು ಸುಂಕವು ಶೂನ್ಯವಾಗಿ ಮುಂದುವರಿಯುತ್ತದೆ.

<><><><>

ವಾರ್ಷಿಕ ಅಮರನಾಥ ಯಾತ್ರೆ ಈ ವರ್ಷ ಜುಲೈ ೩ ರಂದು ಪ್ರಾರಂಭವಾಗಿ ಆಗಸ್ಟ್ ೨೮ ರಂದು ರಕ್ಷಾ ಬಂಧನ ದಿನದಂದು ಮುಕ್ತಾಯಗೊಳ್ಳಲಿದೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ನೀಡಿರುವ ಜಮ್ಮು-ಕಾಶ್ಮೀರ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ, ಯಾತ್ರೆ ಒಟ್ಟು ೫೭ ದಿನಗಳವರೆಗೆ ನಡೆಯಲಿದೆ ಎಂದು ತಿಳಿಸಿದ್ದಾರೆ.

ಶಿವನ ಆಶೀರ್ವಾದ ಪಡೆಯಲು ನಡೆಸುವ ಪ್ರಥಮ ಪೂಜೆಯನ್ನು ಜೂನ್ ೨೯ ರಂದು ಜ್ಯೇಷ್ಠ ಪೂರ್ಣಿಮೆಯ ಸಂದರ್ಭದಲ್ಲಿ ನಡೆಸಲಾಗುವುದು. ಯಾತ್ರೆಗೆ ಮುಂಗಡ ನೋಂದಣಿ ಇದೇ ೧೫ ರಿಂದ ಆನ್‌ಲೈನ್ ಮತ್ತು ಆಫ್‌ಲೈನ್ ವಿಧಾನಗಳ ಮೂಲಕ ಪ್ರಾರಂಭವಾಗಲಿದೆ ಎಂದು ಮಾಹಿತಿ ನೀಡಿದ್ದಾರೆ. ಜಮ್ಮು ಮತ್ತು ಕಾಶ್ಮೀರ ಬ್ಯಾಂಕ್, ಪಂಜಾಬ್ ನ್ಯಾಷನಲ್ ಬ್ಯಾಂಕ್, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಮತ್ತು ಯೆಸ್ ಬ್ಯಾಂಕ್ ಸೇರಿದಂತೆ ದೇಶಾದ್ಯಂತ ೫೫೪ ಬ್ಯಾಂಕ್ ಶಾಖೆಗಳಲ್ಲಿ ನೋಂದಣಿ ಸೌಲಭ್ಯಗಳು ಲಭ್ಯವಿರುತ್ತವೆ.

<><><><>

ಖ್ಯಾತ ಹಿನ್ನೆಲೆ ಗಾಯಕಿ ಆಶಾ ಬೋಸ್ಲೆ ಅವರಿಗೆ ಹೃದಯಾಘಾತವಾದ ಹಿನ್ನೆಲೆ ಮುಂಬೈನ ಬ್ರೀಚ್ ಕ್ಯಾಂಡಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಪ್ರಸ್ತುತ ಅವರು ಆಸ್ಪತ್ರೆಯ ತುರ್ತು ವೈದ್ಯಕೀಯ ಸೇವೆಗಳ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ವೈದ್ಯ ಡಾ.ಪ್ರತೀತ್ ಸಮದಾನಿ, ಆಶಾ ಬೋಸ್ಲೆ ಅವರು ನಿಕಟ ವೀಕ್ಷಣೆಯಲ್ಲಿದ್ದಾರೆ ಮತ್ತು ಅಗತ್ಯ ವೈದ್ಯಕೀಯ ಆರೈಕೆಯನ್ನು ಪಡೆಯುತ್ತಿದ್ದಾರೆ. ಆಸ್ಪತ್ರೆಯು ಅವರ ಸ್ಥಿತಿಯನ್ನು ಮೇಲ್ವಿಚಾರಣೆ ಮಾಡುತ್ತಿದೆ ಎಂದು ಹೇಳಿದ್ದಾರೆ. ಆಶಾ ಭೋಸ್ಲೆ ಅವರ ಆರೋಗ್ಯದ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಕಳವಳ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ಶೀಘ್ರವಾಗಿ

ಚೇತರಿಸಿಕೊಳ್ಳಲಿ ಎಂದು ಹಾರೈಸಿದ್ದು, ಅವರ ಉತ್ತಮ ಆರೋಗ್ಯಕ್ಕಾಗಿ ಪ್ರಾರ್ಥಿಸಿದ್ದಾರೆ.ಈ ನಡುವೆ ದೇಶಾದ್ಯಂತ ಅಪಾರ ಅಭಿಮಾನಿಗಳು ಅವರ ಶೀಘ್ರ ಚೇತರಿಕೆಗಾಗಿ ಪ್ರಾರ್ಥಿಸುತ್ತಿದ್ದಾರೆ.

<><><>

ಭಾರತದ ಆರ್ಥಿಕ ಬೆಳವಣಿಗೆಯ ಪ್ರಯಾಣ, ಅದರ ಅಂತಾರಾಷ್ಟ್ರೀಯ ಪಾಲುದಾರರಿಗೆ ಒಂದು ದೊಡ್ಡ ಅವಕಾಶವಾಗಿದೆ ಎಂದು ಅಮೆರಿಕದಲ್ಲಿರುವ ಭಾರತದ ರಾಯಭಾರಿ ವಿನಯ್ ಮೋಹನ್ ಕ್ವಾತ್ರಾ ಹೇಳಿದ್ದಾರೆ. ಕೊಲಂಬಿಯಾ ವಿಶ್ವವಿದ್ಯಾಲಯದಲ್ಲಿ ನಡೆದ 'ಕೊಲಿಂಬಿಯಾ ಭಾರತೀಯ ಆರ್ಥಿಕ ಶೃಂಗಸಭೆ-೨೦೨೬ ಅಭಿವೃದ್ಧಿ ಹೊಂದಿದ ಭಾರತಕ್ಕಾಗಿ ಅನ್ವೇಷಣೆ' ಎಂಬ ವಿಶೇಷ ಕಾರ್ಯಕ್ರಮದಲ್ಲಿ ಕ್ವಾತ್ರಾ ಅವರು ಭಾಗವಹಿಸಿ ಮಾತನಾಡಿದರು. ದ್ವಿಪಕ್ಷೀಯ ಸಂಬಂಧಗಳ ಮಹತ್ವವನ್ನು ಉಲ್ಲೇಖಿಸಿದ ಅವರು, ಭಾರತ-ಅಮೆರಿಕಾ ಸಹಭಾಗಿತ್ವವು “ಅತ್ಯಂತ ಪ್ರಮುಖ ಮತ್ತು ಪರಿಣಾಮಕಾರಿ” ಸಹಭಾಗಿತ್ವಗಳಲ್ಲಿ ಒಂದಾಗಿದೆ ಎಂದು ಹೇಳಿದರು.

<><><>

ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿ ಇಂದು ಎರಡು ಪಂದ್ಯಗಳು ಆಯೋಜನೆಗೊಂಡಿವೆ. ಲಕ್ನೋದ ಭಾರತ ರತ್ನ ಶ್ರೀ ಅಟಲ್ ಬಿಹಾರಿ ವಾಜಪೇಯಿ ಏಕನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿರುವ ದಿನದ ಮೊದಲ ಪಂದ್ಯದಲ್ಲಿ ಲಖ್ನೋ ಸೂಪರ್ ಜೈಂಟ್ಸ್ ಹಾಗೂ ಗುಜರಾತ್ ಟೈಟನ್ಸ್ ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩.೩೦ ಕ್ಕೆ ಆರಂಭವಾಗಲಿದೆ. ಮುಂಬೈನ ವಾಂಖಡೆ ಕ್ರೀಡಾಂಗಣದಲ್ಲಿ ಸಂಜೆ ೭.೩೦ ಕ್ಕೆ ಪ್ರಾರಂಭವಾಗಲಿರುವ ದಿನದ ಎರಡನೇ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಮುಂಬೈ ಇಂಡಿಯನ್ಸ್ ತಂಡ ಎದುರಿಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>